ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪ್ಯೆ 2018, ದಿನಾಂಕ: 20.09.2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯ ಅಡಿಯಲ್ಲಿ ಅನುಮೋದನೆ ನೀಡಿರುವ ರೂ.2.00 ಕೋಟಿಗಳಿಗಿಂತ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿ.ಯಿಂದ ನಿಯಮಾನುಸಾರ ನಿರ್ಧರಿಸಿ ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವಹಿಸುವ ಕಾಮಗಾರಿಗಳಿಗೆ ಸೀಮಿತವಾಗಿ ಕಾಮಗಾರಿಗಳ ಅಂದಾಜುಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಸರ್ಕಾರದ ಅಧಿಕಾರವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪ್ಯೆ 2018, ದಿನಾಂಕ: 20.09.2019.

2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಬಿ.ಬಿ.ಎಂ.ಪಿ./ಪಿಆರ್/3486/2019-20, ದಿನಾಂಕ: 11.10.2019.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 20.09.2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ ಸರ್ಕಾರದ ಆದೇಶ ಸಂಖ್ಯೆ: ಬೆಂಗಳೂರು ಆದೇಶ ಸಂಖ್ಯೆ: ನಅಇ 375 ಎಂಎನ್‌ಪ್ಯೆ 2018, ದಿನಾಂಕ: 01.02.2019 ರಂತೆ ಅನುಮೋದಿಸಿದ್ದ "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆಯನ್ನು ರದ್ದುಪಡಿಸಿ ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅಡಿಯಲ್ಲಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆಯನ್ನು ನೀಡಲಾಗಿರುತ್ತದೆ. ಸದರಿ ಆದೇಶದಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಆಇ 344 ವೆಚ್ಚ-12/2018 ರಂತೆ ನಿರ್ವಹಿಸಲು ಅನುಮೋದನೆ ನೀಡಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 11.10.2019ರ ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪ್ಯೆ 2018, ದಿನಾಂಕ: 01.02.2019 ರಂತೆ ಅನುಮೋದಿಸಿದ್ದ "ಮುಖ್ಯಮಂತ್ರಿಗಳ ನವ ಬೆಂಗಳೂರು" ಯೋಜನೆಯನ್ನು ರದ್ದುಪಡಿಸಿ, ಪರ್ಯಾಯವಾಗಿ ಮುಖ್ಯಮಂತ್ರಿಗಳ ನವ ನಗರೋತ್ಥಾನ ಕ್ರಿಯಾ ಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪ್ಯೆ 2018, ದಿನಾಂಕ: 20.09.2019 ರಲ್ಲಿ ಸರ್ಕಾರವು ಅನುಮೋದನೆ ನೀಡಿರುತ್ತದೆ. ಈ ಕ್ರಿಯಾಯೋಜನೆಯಲ್ಲಿ ಕೆ.ಆರ್.ಪುರ ವಿಭಾಗಕ್ಕೆ ಸಂಬಂಧಿಸಿದಂತೆ ಅನುಬಂಧ-2, 6 ಮತ್ತು 7 ರಂತೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಅನುಮೋದನೆ

---2

ದೊರತಿದ್ದು, ಜಾಬ್ ಸಂಖ್ಯೆಯನ್ನು ಪಡೆಯಲಾಗಿರುತ್ತದೆ. ಪ್ರಸ್ತಾವನೆಯಲ್ಲಿನ ಕಾಮಗಾರಿಗಳನ್ನು ತುರ್ತಾಗಿ ಕೈಗೆತ್ತಿಕೊಳ್ಳಬೇಕಾಗಿರುವುದರಿಂದ ಪ್ರಸ್ತಾಪಿತ ಕಾಮಗಾರಿಗಳು ರೂ.2.00 ಕೋಟಿ ಮೊತ್ತದ ಮಿತಿಯೊಳಗೆ ಇರುವುದರಿಂದ ಸದರಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಆಇ 344 ವೆಚ್ಚ/2018 ರಂತೆ, ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಲು ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಶವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಆಇ 250 ಎಂಎಸ್‌ಪೈ 2019, ಬೆಂಗಳೂರು, ದಿನಾಂಕ: 15.10.2019

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಆಇ 375 ಎಂಎಸ್‌ಪೈ 2018, ದಿನಾಂಕ: 20.09.2019 ರಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ:ಆಇ 344 ವೆಚ್ಚ-12/2018ರಂತೆ ಕ್ರಮ ವಹಿಸಲು ಅನುಮೋದನೆ ನೀಡಲಾಗಿದ್ದು, ಅವು ತುರ್ತು ಕಾಮಗಾರಿಗಳೇ, ಅಲ್ಲವೇ ಎಂದು ನಿಯಮಾನುಸಾರ ನಿರ್ಧರಿಸುವುದು ಬಿ.ಬಿ.ಎಂ.ಪಿಯ ಆಯುಕ್ತರ ವಿವೇಚನೆಗೆ ಒಳಪಟ್ಟಿದೆ. ಸರ್ಕಾರದ ಆದೇಶ ಸಂಖ್ಯೆ: ನಆಇ 375 ಎಂಎಸ್‌ಪೈ 2018, ದಿನಾಂಕ: 20.09.2019 ರಲ್ಲಿ ಅನುಮೋದಿಸಲಾಗಿರುವ ರೂ.2.00 ಕೋಟಿಗಳಿಂತ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿಯಿಂದ ನಿಯಮಾನುಸಾರ ನಿರ್ಧರಿಸಿ, ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸುವ ಕಾಮಗಾರಿಗಳಿಗೆ ಸೀಮಿತವಾಗಿ ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಸರ್ಕಾರದ ಅಧಿಕಾರವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರುಗೆ ಪ್ರತ್ಯಾಯೋಜಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಲಕ್ಷ್ಮೀಸಾಗರ ಎನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಜಿ.ಜಿ.ಎಂ.ಪಿ).

ಇವರಿಗೆ:

1. ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
7. ಜಂಟಿ ನಿರ್ದೇಶಕರು (ಯೋಜನೆ), ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಒಪ್ಪ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಕಂಪ್ಯೂಟರೀಕರಣ/ಇಲಾಖಾ ವೆಬ